**27-02-2016** ರಂದು ರಾಮನಗರ ಜಿಲ್ಲೆಯ ೨೦೧೫-೧೬ನೇ ಸಾಲಿನ ರಾಗಿ ಖರೀದಿ ಪ್ರಗತಿಯನ್ನು ಖುದ್ದಾಗಿ ಕೃಷಿ ಬೆಲೆ ಆಯೋಗದ ಅಧ್ಯಕ್ಷರು ಪರಿಶೀಲಿಸಿದರು ಮತ್ತು ಜಿಲ್ಲಾಧಿಕಾರಿಗಳ ಸಮ್ಮುಖದಲ್ಲಿ ಸಂಬಂಧಿಸಿದ ಅಧಿಕಾರಿಗಳು, ರೈತರು ಮತ್ತಿತರರೊಡನೆ ಸಭೆ ನಡೆಸಲಾಯಿತು.



ಬೆಂಬಲ ಬೆಲೆಯಲ್ಲಿ ರಾಗಿ ಖರೀದಿಗೆ ಇರುವ ಅಡೆತಡೆಗಳ ನಿವಾರಣೆ

# ದಲ್ಲಾಳಿಗಳ ಹಾವಳಿ: ಕಠಿಣ ಕ್ರಮದ ಎಚ್ಚರಿಕೆ

ಪ್ರಜಾವಾಣಿ ವಾರ್ತೆ

ರಾಮನಗರ : 'ಚನ್ನಪಟ್ಟಣ ತಾಲ್ಲೂಕಿನ ರಾಗಿ ಖರೀದಿ ಕೇಂದ್ರಗಳಲ್ಲಿ ನಡೆಯುತ್ತಿರುವ ದಲ್ಲಾಳಿಗಳ ಹಾವಳಿ ಬಗ್ಗೆ ಸೂಕ್ತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು' ಎಂದು ರಾಜ್ಯ ಬೆಲೆ ಆಯೋಗದ ಅಧ್ಯಕ್ಷ ಪ್ರಕಾಶ್ ಕಮ್ಮರಡಿ ತಿಳಿಸಿದರು.

ಬೆಂಬಲ ಬೆಲೆಯಲ್ಲಿ ರಾಗಿ ಖರೀದಿಗೆ ಇರುವ ಅಡೆತಡೆಗಳ ನಿವಾರಣೆಗೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ರೈತ ಮುಖಂಡರ ಜತೆಗೆ ಜಿಲ್ಲಾ ಕಂದಾಯ ಭವನದಲ್ಲಿ ಶನಿವಾರ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

'ರಾಗಿ ಖರೀದಿ ಕೇಂದ್ರಗಳಲ್ಲಿ ದಲ್ಲಾಳಿಗಳ ಹಾವಳಿ ಅತಿಯಾಗಿದ್ದು, ರೈತರ ಶೋಷಣೆ ನಡೆಯುತ್ತಿದೆ. ಚನ್ನಪಟ್ಟಣದಲ್ಲಿರುವ ರಾಗಿ ಖರೀದಿ ಕೇಂದ್ರದಲ್ಲಿ ಒಬ್ಬ ರೈತ 50 ಕ್ವಿಂಟಾಲ್ ರಾಗಿ ಮಾರಾಟ ಮಾಡಿರುವ ದಾಖಲೆಯಿದೆ. ಒಬ್ಬ ರೈತ ಇಷ್ಟೊಂದು ರಾಗಿ ಬೆಳೆದು ಮಾರಾಟ ಮಾಡಲು ಸಾಧ್ಯವೇ?' ಎಂದು ಸಭೆಯಲ್ಲಿದ್ದ ರೈತರು ಆಯೋಗದ ಅಧ್ಯಕ್ಷರನ್ನು ಪ್ರಶ್ನಿಸಿದಾಗ ಅವರು ಈ ಕುರಿತು ತನಿಖೆಗೆ ಸೂಚಿಸಿದರು.

ಮಧ್ಯವರ್ತಿಗಳ ಹಾವಳಿಯಿಂದ ರೈತರು ನಷ್ಟ ಅನುಭವಿಸುತ್ತಿರುವುದು ವಿಷಾದದ ಸಂಗತಿ. ಆದರೆ ರೈತರು, ದಲ್ಲಾಳಿಗಳು ನೀಡುವ ಕೇವಲ ನೂರು ರೂಪಾಯಿಗೆ ಪಹಣಿ ನೀಡುವಂತಹ ಕೆಲಸಕ್ಕೆ ಹೋಗಬಾರದು ಎಂದು ಕಮ್ಮರಡಿ ಅವರು ಕಿವಿಮಾತು ಹೇಳಿದರು.



ರಾಮನಗರದ ಜಿಲ್ಲಾ ಕಂದಾಯ ಭವನದಲ್ಲಿ ಬೆಂಬಲ ಬೆಲೆಯಡಿ ರಾಗಿ ಖರೀದಿ ಕುರಿತು ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ರೈತ ಮುಖಂಡರ ಜತೆಗೆ ರಾಜ್ಯ ಬೆಲೆ ಆಯೋಗದ ಅಧ್ಯಕ್ಷ ಪ್ರಕಾಶ್ ಕಮ್ಮರಡಿ ಅವರು ಸಭೆ ನಡೆಸಿದರು

ಕೃಷಿ ಬೆಲೆ ಆಯೋಗವು ಪ್ರಸ್ತುತ ಕ್ವಿಂಟಾಲ್ ರಾಗಿಗೆ ₹ 2,100 ಬೆಲೆಯನ್ನು ನಿಗದಿ ಮಾಡಿದೆ. ಆದ್ದರಿಂದ ಸರ್ಕಾರ ನೀಡುತ್ತಿರುವ ಬೆಂಬಲ ಬೆಲೆಯು ರೈತರಿಗೆ ಸಿಗಬೇಕೇ ಹೊರತು, ದಲ್ಲಾಳಿಯ ಪಾಲಾಗಬಾರದು. ರಾಗಿಗೆ ಸರ್ಕಾರ ನೀಡುತ್ತಿರುವ ಈ ಬೆಲೆಯು, ಅಧಿಕೃತ ಬೆಲೆಯಾಗಿದೆ ಎಂದು ಅವರು ತಿಳಿಸಿದರು.

ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಾಗಲೀ ಅಥವಾ ಖಾಸಗಿ ವರ್ತಕರು ಸರ್ಕಾರ ನಿಗದಿ ಮಾಡಿರುವ ಬೆಂಬಲ ಬೆಲೆಗಿಂತ ಕಡಿಮೆ ಬೆಲೆಗೆ ರಾಗಿಯನ್ನು ಖರೀದಿಸುವಂತಿಲ್ಲ. ಒಂದು ವೇಳೆ ಖರೀದಿ ಮಾಡಿದರೆ, ಅಂತಹವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು. ಜತೆಗೆ ಇಂತಹ ಅಕ್ರಮ ಖರೀದಿಯನ್ನು ಕ್ರಿಮಿನಲ್ ಪ್ರಕರಣ ಎಂದು ಪರಿಗಣಿಸುವಂತೆ ಆಯೋಗದ ವತಿಯಿಂದ ಸರ್ಕಾರಕ್ಕೆ ಶಿಫಾರಸು ಮಾಡಲಾಗಿದೆ ಎಂದು ಪ್ರಕಾಶ್ ಕಮ್ಮರಡಿ ತಿಳಿಸಿದರು.

**ಸಮಿತಿ ರಚನೆ:** ರಾಗಿ ಖರೀದಿಯಲ್ಲಿ ನಡೆಯುವ ಅಕ್ರಮಗಳನ್ನು ತಡೆಯಲು, ಗುಣಮಟ್ಟದ ರಾಗಿ ಖರೀದಿಸಲು ಹಾಗೂ ರಾಗಿ ಖರೀದಿಯಲ್ಲಿ ಉಂಟಾಗುವ ಗೊಂದಲಗಳನ್ನು ಪರಿಹರಿಸಲು ಮಾಗಡಿ ತಾಲ್ಲೂಕಿನ ಚಂದುರಾಯನಹಳ್ಳಿಯಲ್ಲಿರುವ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಹಾಗೂ ಆಹಾರ ಇಲಾಖೆಯ ಉಪ ನಿರ್ದೇಶಕರನ್ನು ಒಳಗೊಂಡ ಸಮಿತಿಯನ್ನು ರಚಿಸಲಾಗುವುದು. ಈ ಸಮಿತಿಯು ರಾಗಿ ಗುಣಮಟ್ಟ, ದಲ್ಲಾಳಿಗಳ ಹಾವಳಿ ಸೇರಿದಂತೆ ಇತರೆ ವಿಷಯಗಳ ಬಗ್ಗೆ ಪರಿವೀಕ್ಷಣೆ ಮಾಡಲಿದೆ ಎಂದರು.

**ಎರಡು ಲಕ್ಷ ಕ್ವಿಂಟಾಲ್ ಖರೀದಿ:** ಈ ಬಾರಿ ಜಿಲ್ಲೆಯಲ್ಲಿ ಸುಮಾರು ಎರಡು ಲಕ್ಷ ಕ್ವಿಂಟಾಲ್ ರಾಗಿ ಖರೀದಿಗೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಕೇಂದ್ರ ಸರ್ಕಾರ ಮಾರ್ಚ್ 31ರ ವರೆಗೆ ರಾಗಿ ಖರೀದಿಗೆ ಅವಕಾಶ ನೀಡಿದೆ. ರಾಗಿ ಅಧಿಕ ಹೆಚ್ಚು ಬಂದರೆ, ಖರೀದಿಯ ದಿನಾಂಕವನ್ನು ಮುಂದೂಡಲಾಗುವುದು. ರಾಗಿಯ ಗುಣಮಟ್ಟ ಸರಿ ಇಲ್ಲದೇ ಇದ್ದರೆ ಅಥವಾ ರಾಗಿ ಬಣ್ಣ ಸರಿಯಿಲ್ಲದಿದ್ದರೆ ತಕ್ಷಣ ಜಿಲ್ಲಾಧಿಕಾರಿ ಅವರ ಗಮನಕ್ಕೆ ತಂದು, ಉತ್ತಮ ರಾಗಿ ಖರೀದಿಗೆ ಕ್ರಮ ಕೈಗೊಳ್ಳಬೇಕು ಅವರು ಸೂಚಿಸಿದರು.

ರೈತ ಮುಖಂಡ ಸಿ.ಪುಟ್ಟಸ್ವಾಮಿ ಮಾತನಾಡಿ, ರಾಗಿ ಖರೀದಿ ಕೇಂದ್ರಗಳಲ್ಲಿ ರೈತರನ್ನು ಶೋಷಣೆ ಮಾಡುತ್ತಿರುವ ದಲ್ಲಾಳಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುವಂತೆ ಆಗ್ರಹಿಸಿದರು.

ರಾಜ್ಯ ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಲಕ್ಷ್ಮಣ ಸ್ವಾಮಿ ಮಾತನಾಡಿ, ರೈತರು ರಾಗಿ ಖರೀದಿ ಕೇಂದ್ರಕ್ಕೆ ತರುವ ಮುನ್ನ ನಾಡಕಚೇರಿಯಲ್ಲಿ ಹಾಗೂ ಉಪ ತಹಶೀಲ್ದಾರ್ ಅವರಿಂದ ಬೆಲೆ ದೃಢೀಕರಣ ಪತ್ರ ಪಡೆಯಬೇಕು. ಆದರೆ ಅಧಿಕಾರಿಗಳು ರೈತರಿಗೆ ಸೂಕ್ತ ರೀತಿಯಲಿ ಸ್ಪಂದಿಸುತ್ತಿಲ್ಲ. ಹಾಗಾಗಿ ರೈತರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ದೂರಿದರು.

**ಸಹಾಯವಾಣಿ:** ಉಪ ವಿಭಾಗಾಧಿಕಾರಿ ಡಾ.ರಾಜೇಂದ್ರ ಪ್ರಸಾದ್ ಅವರು ಮಾತನಾಡಿ, ರಾಗಿ ಖರೀದಿಗೆ ಸಂಬಂಧಿಸಿದಂತೆ ಗೊಂದಲಗಳ ನಿವಾರಣೆಗೆ ಹಾಗೂ ಖರೀದಿ ಕೇಂದ್ರಗಳಲ್ಲಿ ನಡೆಯುವ ಅಕ್ರಮಗಳ ತಡೆಗೆ, ರೈತರ ದೂರುಗಳನ್ನು ಆಲಿಸುವ ಸಲುವಾಗಿ 'ಸಹಾಯವಾಣಿ ಕೇಂದ್ರ'ವನ್ನು ತೆರೆಯಲಾಗುವುದು. ಇದು ದಿನದ 24 ಗಂಟೆಗಳ ಕಾಲ ಕಾರ್ಯ ನಿರ್ವಹಿಸಲಿದ್ದು, ರೈತರು ಉಚಿತವಾಗಿ ಕರೆ ಮಾಡಬಹುದು ಎಂದರು.

ರಾಗಿ ಮಾರಾಟ ಮಾಡುವ ರೈತರಿಗೆ ಒಂದು ದಿವಸದ ಒಳಗೆ ಬೆಳೆ ದೃಢೀಕರಣ ಪತ್ರ ನೀಡಲು ಕ್ರಮ ವಹಿಸಲಾಗುವುದು. ಆದರೆ ರಾಗಿ ಗುಣಮಟ್ಟಕ್ಕೆ ಸಂಬಂಧಿಸಿದಂತೆ ಯಾವುದೇ ರಾಜಿ ಇಲ್ಲ. ಮಾರಾಟ ಕೇಂದ್ರಕ್ಕೆ ಹೆಚ್ಚು ರಾಗಿ ಬಂದರೆ ಹೆಚ್ಚು ಕೌಂಟರ್‌ಗಳನ್ನು ತೆರೆಯಲಾಗುವುದು. ದಲ್ಲಾಳಿಗಳ ಹಾವಳಿಯನ್ನು ನಿಯಂತ್ರಿಸುವ ಸಲುವಾಗಿ ಮುಂಬರುವ ದಿನಗಳಲ್ಲಿ ರಾಗಿ ಮಾರಾಟ ಮಾಡಲು ಬರುವ ರೈತರು ಪಹಣಿ ಜತೆಗೆ ಆಧಾರ್ ಕಾರ್ಡ್, ಎಪಿಕ್ ಕಾರ್ಡ್ ಹಾಗೂ ಕುಟುಂಬ ಸದಸ್ಯರನ್ನೊಳಗೊಂಡ ಭಾವಚಿತ್ರವನ್ನು ಸಲ್ಲಿಸುವುದನ್ನು ಕಡ್ಡಾಯ ಮಾಡಲಾಗುವುದು ಎಂದು ಅವರು ತಿಳಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಡಾ. ಪ್ರಶಾಂತ್, ತಹಶೀಲ್ದಾರ್ ಎಚ್.ಟಿ. ಮಂಜಪ್ಪ, ಕೃಷಿ ಇಲಾಖೆ ಜಂಟಿ ನಿರ್ದೇಶಕಿ ದೀಪಜಾ, ಆಹಾರ ಇಲಾಖೆ ಉಪ ನಿರ್ದೇಶಕ ವೃಷಭರಾಜೇಂದ್ರ ಮೂರ್ತಿ, ರೈತ ಮುಖಂಡರಾದ ಬೈರೇಗೌಡ, ಸೀಬೇಕಟ್ಟೆ ಕೃಷ್ಣಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಮುಖ್ಯಾಂಶಗಳು**

- ಚನ್ನಪಟ್ಟಣದ ರಾಗಿ ಖರೀದಿ ಕೇಂದ್ರದಲ್ಲಿ ದಲ್ಲಾಳಿಗಳ ಹಾವಳಿ
- ಕೃಷಿ ಬೆಲೆ ಆಯೋಗ ನಿಗದಿ ಪಡಿಸಿರುವ ಬೆಲೆ ₹ 2,100
- ಅಕ್ರಮ ತಡೆಯಲು ಸಮಿತಿ ರಚನೆಗೆ ಕ್ರಮ